ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು)
ಅ. ಸದ್ಯಕ್ಕೆ ಇಲ್ಲ.
ಆ. ಉದ್ಭವಿಸುವುದಿಲ್ಲ.

233 (430): ಶ್ರೀ ನಿಂಗಪ್ಪ ಹೆಚ್. (ಕುಣಿಗಲ್)

ಶ್ರೀ ಹನುಮಂತಪ್ಪ ವೈ ಆಲ್ಕೋಡ್ (ಯುವಜನಸೇವಾ ಹಾಗೂ ಕ್ರೀಡಾ ಸಚಿವರು) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರು.

ಅ. ಕುಣಿಗಲ್‌ನಲ್ಲಿ ಕ್ರೀಡಾಂಗಣ ನಿರ್ಮಾಣ ಕಾರ್ಯ ವಿಳಂಬವಾಗಿರುವುದಕ್ಕೆ ಕಾರಣವೇನು;

ಆ. ಇದರಿಂದ ಕ್ರೀಡಾಪಟುಗಳಿಗೆ ತೊಂದರೆಯಾಗಿದ್ದು ಸರ್ಕಾರ ಶೀಘ್ರ ಕ್ರಮ ಕೈಗೊಂಡು ಕಾರ್ಯಾರಂಭ ಮಾಡುವುದೇ;

ಇ. ಹಾಗಿದ್ದಲ್ಲಿ, ಯಾವ ಅವಧಿಯೊಳಗಾಗಿ ಮಾಡಲಾಗುವುದು ನಿರ್ಮಾಣ ಕಾರ್ಯ ಪ್ರಾರಂಭಿಸಲಾಗುವುದು?

ಶ್ರೀ ಹನುಮಂತಪ್ಪ ವೈ ಆಲ್ಕೋಡ್ (ಯುವಜನಸೇವಾ ಹಾಗೂ ಕ್ರೀಡಾ ಸಚಿವರು)

ಅ. ತುಮಕೂರು ಜಿಲ್ಲೆ, ಕುಣಿಗಲ್ ಪಟ್ಟಣದಲ್ಲಿ ತಾಲ್ಲೂಕು ಕ್ರೀಡಾಂಗಣ ನಿರ್ಮಿಸಲು ರೂ. 44.95 ಲಕ್ಷಗಳ ಅಂದಾಜು ವೆಚ್ಚದಲ್ಲಿ ಜಿಲ್ಲಾ ಪಂಚಾಯತ್ ಅಡಿಯಲ್ಲಿ ನಿರ್ಮಿಸಲು ಸರ್ಕಾರ ಆದೇಶ ವಾಪ್ರಯು 112 ಯುಸೇಕ್ರೀ 2003 ದಿನಾಂಕ: 7.7.2003 ರಲ್ಲಿ ಕ್ರೀಡಾಂಗಣ ನಿರ್ಮಿಸಲು ಮಂಜೂರಾತಿ ನೀಡಿದೆ. ಅನುದಾನ ಕೊರತೆಯಿಂದ ಈ ಕ್ರೀಡಾಂಗಣ ನಿರ್ಮಾಣ ಕಾರ್ಯ ವಿಳಂಬವಾಗಿದೆ.

ಆ. ಕ್ರೀಡಾಪಟುಗಳಿಗೆ ತೊಂದರೆಯಾಗದಂತೆ ಈ ಕ್ರೀಡಾಂಗಣದ ನಿರ್ಮಾಣ ಕಾಮಗಾರಿಯನ್ನು 12ನೇ ಹಣಕಾಸು ಆಯೋಗದ 2ನೇ ಹಂತದ ಧನ ಸಹಾಯದ ಅನುದಾನದಲ್ಲಿ ಕಾರ್ಯಾರಂಭ ಮಾಡಲಾಗುವುದು.

ಇ. 2007–08 ರಲ್ಲಿ ನಿರ್ಮಾಣ ಕಾರ್ಯ ಪ್ರಾರಂಭಿಸಲಾಗುವುದು.

234 (431): ಶ್ರೀ ನಿಂಗಪ್ಪ ಹೆಚ್ (ಕುಣಿಗಲ್

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರು.

ಅ. ಅಕ್ರಮ ಗಣಿಗಾರಿಕೆಯಿಂದ ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿ ನಷ್ಟವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ. ಹಾಗಿದ್ದಲ್ಲಿ, ಸದರಿ ಅಕ್ರಮ ಗಣಿಗಾರಿಕೆ ತಡೆಗಟ್ಟಲು ಸರ್ಕಾರ ಈ ತನಕ ಕೈಗೊಂಡಿರುವ ಕ್ರಮವೇನು ಮತ್ತು ಮುಂದೆ ಕೈಗೊಳ್ಳಲು ಉದ್ದೇಶಿಸಿರುವ ಕ್ರಮವೇನು?

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು)

ಅ. ಅಕ್ರಮ ಗಣಿಗಾರಿಕೆಯ ಬಗ್ಗೆ ದೂರುಗಳು ಹಾಗೂ ಕೆಲವು ಪ್ರಕರಣಗಳು ಗಮನಕ್ಕೆ ಬಂದಿದ್ದು, ಅದರ ಮೇಲೆ ಕಾನೂನು ಪ್ರಕಾರ ಕ್ರಮ ಕೈಗೊಳ್ಳಲಾಗುತ್ತಿದೆ.

ಆ. ಅಕ್ರಮ ಗಣಿಗಾರಿಕೆಯನ್ನು ತಡೆಗಟ್ಟಲು ಈ ಕೆಳಕಂಡ ಕ್ರಮ ಕೈಗೊಳ್ಳಲಾಗುತ್ತಿದೆ. ಅನಧಿಕೃತ ಗಣಿಗಾರಿಕೆಯಲ್ಲಿ ತೊಡಗಿರುವವರ ಮೇಲೆ ನೋಟೀಸ್ ಜಾರಿ ಮಾಡಿ, ನ್ಯಾಯಾಲಯದಲ್ಲಿ ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. ಅನಧಿಕೃತ ಖನಿಜ ಸಾಗಾಣಿಕೆ, ನಿಗದಿಪಡಿಸಿದ ತೂಕಕ್ಕಿಂತ ಹೆಚ್ಚಿನ ಸಾಗಾಣಿಕೆ ಅಥವಾ ಪರವಾನಿಗೆ ಅವಧಿ ಮುಗಿದ ನಂತರ ಸಾಗಾಣಿಕೆ ಮಾಡುವವರ ವಿರುದ್ಧ ಕಾನೂನು ಪ್ರಕಾರ ರೂ. 25,000.00 ವರೆಗೆ ದಂಡ ವಿಧಿಸಲಾಗುತ್ತಿದೆ. ಇದುವರೆಗೂ ರಾಜ್ಯದಾದ್ಯಂತ 2005–06ನೇ ಸಾಲಿನಲ್ಲಿ 1053 ಪ್ರಕರಣಗಳನ್ನು ಗುರುತಿಸಿ 265 ಪ್ರಕರಣಗಳಲ್ಲಿ ದೂರು ದಾಖಲಿಸಲಾಗಿದೆ. 688 ಪ್ರಕರಣಗಳಲ್ಲಿ ದಂಡ ವಿಧಿಸಿ ರೂ. 3.36 ಕೋಟಿ ದಂಡ ಸಂಗ್ರಹಿಸಲಾಗಿದೆ. ಅಕ್ರಮ ಗಣಿಗಾರಿಕೆಯನ್ನು ತಡೆಗಟ್ಟಲು ದಿನಾಂಕ: 16.11.2005ರ ಸರ್ಕಾರಿ ಆದೇಶ ಸಂಖ್ಯೆ: ಸಿಐ,194:ಎಎಂಎಂ.2005ರಂತೆ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಹಾಗೂ ರಾಜ್ಯಮಟ್ಟದಲ್ಲಿ ಸರ್ಕಾರದ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಟಾಸ್ಕ್ ಫೋರ್ಸ್ ಸಮಿತಿಗಳನ್ನು ರಚಿಸಲಾಗಿದೆ. ಈ ಸಮಿತಿಯಲ್ಲಿ ಅರಣ್ಯ, ಕಂದಾಯ, ಸಾರಿಗೆ, ಪೋಲೀಸ್, ಮಾಲಿನ್ಯ ನಿಯಂತ್ರಣ ಮಂಡಳಿ, ಇಂಡಿಯನ್ ಬ್ಯೂರೋ ಆಫ್ ಮೈನ್ಸ್ ಹಾಗೂ ಗಣಿ ಮತ್ತು ಭೂವಿಜ್ಞಾನ ಇಲಾಖೆಯ ಅಧಿಕಾರಿಗಳಿದ್ದು, ಅನಧಿಕೃತ ಗಣಿಗಾರಿಕೆಯನ್ನು ಗುರ್ತಿಸಿ, ತಡೆಗಟ್ಟಲು ಕ್ರಮ ಕೈಗೊಳ್ಳಲಾಗುತ್ತಿದೆ. ಹೆಚ್ಚು ಖನಿಜ ಸಾಗಾಣಿಕೆಯಾಗುತ್ತಿರುವ ರಸ್ತೆಗಳಲ್ಲಿ ತನಿಖಾ ಠಾಣೆಗಳನ್ನೂ ನಿರ್ಮಿಸಲಾಗುತ್ತಿದೆ. ಗಣಿ ಮತ್ತು ಭೂವಿಜ್ಞಾನ ಇಲಾಖೆ, ಸಾರಿಗೆ ಇಲಾಖೆ, ಅರಣ್ಯ ಇಲಾಖೆ ಹಾಗೂ ಕಂದಾಯ ಇಲಾಖೆಗಳು ರಸ್ತೆಗಳಲ್ಲಿ ವಾಹನಗಳನ್ನು ತಪಾಸಣೆ ಮಾಡಿ ಅಕ್ರಮ ಸಾಗಾಣಿಕೆ ತಡಗಟ್ಟಲು ಕ್ರಮ ಕೈಗೊಳ್ಳುತ್ತಿವೆ.

ಅಲ್ಲದೆ, ಈ ರೀತಿ ಅನಧಿಕೃತ ಗಣಿಗಾರಿಕೆ ತಡೆಗಟ್ಟಲು ಜಿಲ್ಲಾ ಪೋಲೀಸ್ ಇಲಾಖೆಯ ಸಹಕಾರದೊಂದಿಗೆ ತಪಾಸಣೆ ಮಾಡಿ, ಅಕ್ರಮ

ಗಣಿಗಾರಿಕೆ ನಡೆಯುತ್ತಿರುವುದು ಕಂಡುಬಂದಲ್ಲಿ ಅಂಥವರ ವಿರುದ್ಧ ಕಾನೂನು ರೀತಿಯ ಕ್ರಮ ತೆಗೆದುಕೊಂಡು, ದಂಡ ವಿಧಿಸಲಾಗುತ್ತಿದೆ. ಹಾಗೂ ರಾತ್ರಿ ಕಾವಲು ಪಹರೆಯನ್ನು ನೇಮಿಸಿ ನಿರ್ವಹಿಸಲಾಗುತ್ತಿದೆ.

235 (432): ಶ್ರೀ ನಿಂಗಪ್ಪ ಹೆಚ್. (ಕುಣಿಗಲ್)

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರು.

ಅ. ಕುಣಿಗಲ್ ತಾಲ್ಲೂಕು ಕೆಂಪನಹಳ್ಳಿ ವಿದ್ಯುತ್ ಉಪಕೇಂದ್ರವು (ಎಂ.ಯು.ಎಸ್.ಎಸ್) ಮಂಜೂರಾತಿಯಾಗಿದ್ದರೂ ಈ ತನಕ ಕಾರ್ಯಾರಂಭವಾಗದಿರಲು ಇರುವ ತೊಂದರೆಗಳೇನು;

ಆ. ಶೀಘ್ರ ಕಾರ್ಯಾರಂಭಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮುಖ್ಯಮಂತ್ರಿಗಳು)

ಅ.ಆ. ಕುಣಿಗಲ್ ತಾಲ್ಲೂಕು ಕೆಂಪನಹಳ್ಳಿ ವಿದ್ಯುತ್ ಉಪಕೇಂದ್ರದ ನಿರ್ಮಾಣಕ್ಕೆ (ಎಂ.ಯು.ಎಸ್.ಎಸ್.) ಸಂಬಂಧಿಸಿದ ವಿವರವಾದ ಯೋಜನಾ ವರದಿಗೆ ಕವಿಪ್ರನಿನಿಯು ಆಗಸ್ಟ್ 2005ರಲ್ಲಿ ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿರುತ್ತದೆ. ಆಡಳಿತಾತ್ಮಕ ಮಂಜೂರಾತಿ ಆದ ನಂತರವೇ ಕಾಮಗಾರಿಯ ನಿರ್ವಹಣೆಗೆ ಟೆಂಡರ್‌ಗಳನ್ನು ಆಹ್ವಾನಿಸಲು ಸಾಧ್ಯವಾಗುತ್ತದೆ. ಅಲ್ಲದೇ, ಆರ್ಥಿಕ ಹೊಂದಾಣಿಕೆಯೂ ಆಗಬೇಕಾಗಿರುತ್ತದೆ. ದಿನಾಂಕ: 17.02.2006ರಂದು 'ಟರ್ನ್ ಕೀ' ಆಧಾರದಲ್ಲಿ ಈ ಕಾಮಗಾರಿಯ ನಿರ್ವಹಣೆಗೆ ಟೆಂಡರ್ ಕರೆಯಲಾಗಿರುತ್ತದೆ. ಟೆಂಡರ್‌ಗಳ ಸ್ವೀಕೃತಿಗೆ 28.03.2006 ಕೊನೆಯ ದಿನಾಂಕವಾಗಿರುತ್ತದೆ. ಟೆಂಡರ್ ಪ್ರಕ್ರಿಯೆಯು ಸಂಪೂರ್ಣಗೊಂಡ ನಂತರ, ಗುತ್ತಿಗೆದಾರರನ್ನು ಗೊತ್ತುಪಡಿಸಲಾಗುತ್ತದೆ. ಗೊತ್ತುಪಡಿಸಲಾಗುವ ಗುತ್ತಿಗೆದಾರರಿಗೆ ಕಾಮಗಾರಿಯನ್ನು ವಹಿಸಿಕೊಟ್ಟನಂತರ ಸದರಿ ವಿದ್ಯುತ್ ಉಪ-ಕೇಂದ್ರದ ನಿರ್ಮಾಣ ಕಾರ್ಯವನ್ನು ಪ್ರಾರಂಭಿಸಲಾಗುವುದು.

236 (78): ಶ್ರೀ ನಿರಾಣಿ ಮುರುಗೇಶ್ ರುದ್ರಪ್ಪ (ಬೀಳಗಿ)

ಶ್ರೀ ಹೆಚ್.ಡಿ. ಕುಮಾರಸ್ವಾಮಿ (ಮಾನ್ಯ ಮುಖ್ಯಮಂತ್ರಿಗಳು) ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವವರು.

ಅ. ಬೀಳಗಿ ಪಟ್ಟಣಕ್ಕೆ ಐ.ಡಿ.ಎಸ್.ಎಂ.ಟಿ.ಯೋಜನೆಯ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;